ಕೊಠಡಿಗಳು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣ ವಾಗಿದೆಯೇ (ಮಾಹಿತಿ ನೀಡುವುದು);

ಆ) ಈ ಕಾಲೇಜಿನಲ್ಲಿ ಕುಡಿಯುವ ನೀರು, ವಿದ್ಯುತ್, ಶೌಚಾಲಯ, ಆಟದ ಮೈದಾನದ ವ್ಯವಸ್ಥೆ ಇತ್ಯಾದಿ ಮೂಲಭೂತ ಸೌಲಭ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಮೂಲಭೂತ ಸೌಲಭ್ಯ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ಒದಗಿಸುವುದು)?

ಶ್ರೀ ಪಿ.ಟಿ. ರವಿ (ಉನ್ನತ ಶಿಕ್ಷಣ ಸಚಿವರು) :

ಅ) ಬೇಲೂರು ತಾಲ್ಲೂಕು ಹಳೇಬೀಡು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಒಂಭತ್ತು ಕೊಠಡಿಗಳು ಇರುತ್ತವೆ. ಈ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಕೊಠಡಿಗಳು ಇರುವುದಿಲ್ಲ.

ಆ) ಬಂದಿದೆ.

ಇ) ಸದರಿ ಕಾಲೇಜಿಗೆ ಹೆಚ್ಚುವರಿ ಕೊಠಡಿ ನಿರ್ಮಿಸಲು ರೂ.75.00 ಲಕ್ಷಗಳು ಹಾಗೂ ವಿದ್ಯಾರ್ಥಿನಿಯರಿಗೆ ವಿಶ್ರಾಂತಿ ಗೃಹಗಳನ್ನು ಒಳಗೊಂಡಂತೆ ಶೌಚಾಲಯ ನಿರ್ಮಿಸಲು ರೂ.5.00 ಲಕ್ಷಗಳನ್ನು ಮತ್ತು ಕಾಲೇಜಿಗೆ ವಿದ್ಯುತ್ ಸಂಪರ್ಕ ಪಡೆಯಲು ರೂ.2.00 ಲಕ್ಷಗಳನ್ನು 2012–13ನೇ ಸಾಲಿನಲ್ಲಿ ಮಂಜೂರು ಮಾಡಲಾಗಿರುತ್ತದೆ.

ಆರಾಧನಾ ಯೋಜನೆ

584 (502) ಶ್ರೀ ರುದ್ರೇಶಗೌಡ ವೈ.ಎನ್. (ಬೇಲೂರು) : ಮಾನ್ಯ ಮುಜರಾಯಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಆರಾಧನಾ ಯೋಜನೆಯಡಿಯಲ್ಲಿ 2010–11, 2011–12 ಹಾಗೂ 2012–13ನೇ ಸಾಲಿನಲ್ಲಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; (ಕ್ಷೇತ್ರವಾರು ವಿವರ ನೀಡುವುದು);

ಆ) ಇತ್ತೀಚೆಗೆ ಅನುದಾನ ಬಿಡುಗಡೆಯಾಗದೇ ದೇವಸ್ಥಾನಗಳ ಅಭಿವೃದ್ಧಿಗೆ ತೊಂದರೆಯಾಗಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;

ಇ) 2012–13ನೇ ಸಾಲಿನ ಅನುದಾನ ಯಾವಾಗ ಬಿಡುಗಡೆ ಮಾಡಲಾಗುವುದು (ಮಾಹಿತಿ ನೀಡುವುದು)?

ಶ್ರೀ ಕೋಟಾ ಶ್ರೀನಿವಾಸ ಪೂಜಾರಿ (ಮುಜರಾಯಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು) :

ಅ) ಆರಾಧನಾ ಯೋಜನೆಯಡಿಯಲ್ಲಿ 2010–11, 2011–12 ಹಾಗೂ 2012–13ನೇ ಸಾಲಿನಲ್ಲಿ ಈ ಕೆಳಕಂಡಂತೆ ಹಣ ಬಿಡುಗಡೆ ಮಾಡಲಾಗಿರುತ್ತದೆ.

ವರ್ಷ	ಅನುದಾನ ಬಿಡುಗಡೆಯಾದ ಮೊತ್ತ (ರೂ.ಲಕ್ಷಗಳಲ್ಲಿ)	224 ಕ್ಷೇತ್ರಗಳಿಗೆ ಕ್ಷೇತ್ರವಾರು ಬಿಡುಗಡೆ ಮಾಡಿರುವ ಅನುದಾನದ ವಿವರ (ರೂ.ಲಕ್ಷಗಳಲ್ಲಿ)
2010–11	1,60,00,000.00	71,428.00
2011–12	8,37,20,000.00	3,73,750.00
2012–13	6,27,90,000.00	2,80,312.00

ಆ) ಈಗಾಗಲೇ ಮೇಲೆ ತಿಳಿಸಿರುವಂತೆ 1/3 ಭಾಗ ಅನುದಾನವನ್ನು ಪ್ರತಿ ವಿಧಾನಸಭಾ ಕ್ಷೇತ್ರಗಳಿಗೆ ಹಂಚಿಕೆ ಮಾಡಿರುವುದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) 2012–13ನೇ ಸಾಲಿನ ಆಯವ್ಯಯದಲ್ಲಿ ಈ ಯೋಜನೆಯಡಿ ರೂ.8,37,20,000–00 ಅನುದಾನವನ್ನು ಒದಗಿಸಿದ್ದು, ಇದರಲ್ಲಿ ಶೇಕಡ 75% ರಷ್ಟು ಅಂದರೆ, ರೂ.6,27,90,000.00 ಗಳಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ರೂ.2,80,312.00 ರಂತೆ ಬಿಡುಗಡೆ ಮಾಡಲಾಗಿರುತ್ತದೆ.